**All India Radio: Bangalore**
**National Bulletin In Kannada**
**21.06.2026  19.35 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

ಮುಖ್ಯಾಂಶಗಳು

೧. ಅಭಿವೃದ್ಧಿಯ ಫಲ ಸಮಾಜದ ಎಲ್ಲಾ ವರ್ಗಕ್ಕೂ ತಲುಪಿದಾಗ ಮಾತ್ರ ವಿಕಸಿತ ಭಾರತ ನಿರ್ಮಾಣ ಸಾಧ್ಯ: ರಾಷ್ಟ್ರಪತಿ ದ್ರೌಪದಿ ಮುರ್ಮು

೨. ಸ್ವಿಟ್ಜರ್‌ಲ್ಯಾಂಡ್‌ನಲ್ಲಿಂದು, ಪಶ್ಚಿಮ ಏಷ್ಯಾ ಸಂಘರ್ಷ ಕೊನೆಗೊಳಿಸುವ ನಿಟ್ಟಿನಲ್ಲಿ ಅಮೆರಿಕಾ-ಇರಾನ್ ಮಾತುಕತೆ ಆರಂಭ

೩. ದೇಶ-ವಿದೇಶಗಳಲ್ಲಿ ವಿಜೃಂಭಣೆಯಿಂದ ನಡೆದ ೧೨ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

೪. ತಮಿಳುನಾಡಿನ ಸಮುದ್ರಾಹಾರ ಕಾರ್ಖಾನೆಯಲ್ಲಿ ಅಮೋನಿಯಾ ಅನಿಲ ಸೋರಿಕೆ: ೭ ಸಾವು, ೭೦ ಮಂದಿ ಅಸ್ವಸ್ಥ

೫. ತ್ರಿಕೋನ ಏಕದಿನ ಕ್ರಿಕೆಟ್ 'ಎ' ಸರಣಿ: ಫೈನಲ್‌ನಲ್ಲಿ ಆತಿಥೇಯ ಶ್ರೀಲಂಕಾ ವಿರುದ್ಧ ೭೮ ರನ್‌ಗಳಿಂದ ಗೆದ್ದ ಭಾರತ 'ಎ' ತಂಡ

---

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಮಧ್ಯಪ್ರದೇಶದ ಜಬಲ್ಪುರ್‌ನಲ್ಲಿರುವ ರಾಣಿ ದುರ್ಗಾವತಿ ವಿಶ್ವವಿದ್ಯಾಲಯದ ೩೮ನೇ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಿ, ವಿವಿಧ ವಿಭಾಗಗಳಲ್ಲಿ ಚಿನ್ನದ ಪದಕಗಳನ್ನು ಪ್ರದಾನ ಮಾಡಿದರು.

ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ವಿಶ್ವವಿದ್ಯಾಲಯಕ್ಕೆ ಹೆಸರಾಗಿರುವ ರಾಣಿ ದುರ್ಗಾವತಿ ಅವರು ಧೈರ್ಯ, ಶೌರ್ಯ ಮತ್ತು ಪರಾಕ್ರಮದ ಪ್ರತೀಕವಾಗಿದ್ದರು. ಭಾರತೀಯ ಮಹಿಳೆಯರಿಗೆ ಸ್ಫೂರ್ತಿಯಾಗಿದ್ದು, ಮುಂದಿನ ಪೀಳಿಗೆಗಳಿಗೂ ಪ್ರೇರಣೆಯಾಗಿದ್ದಾರೆ ಎಂದು ತಿಳಿಸಿದರು.

೨೦೪೭ರೊಳಗೆ ವಿಕಸಿತ ಭಾರತ ನಿರ್ಮಾಣದ ಗುರಿ ಸಾಧಿಸಬೇಕಾದರೆ ಅಭಿವೃದ್ಧಿಯ ಫಲಗಳು ಸಮಾಜದ ಪ್ರತಿಯೊಂದು ವರ್ಗ ಹಾಗೂ ಪ್ರತಿಯೊಬ್ಬ ವ್ಯಕ್ತಿಗೂ ತಲುಪಬೇಕು. ಶಿಕ್ಷಣವು ವ್ಯಕ್ತಿ ಹಾಗೂ ಸಮಾಜದ ಅಭಿವೃದ್ಧಿಗೆ ಅತ್ಯಂತ ಪರಿಣಾಮಕಾರಿ ಸಾಧನವಾಗಿದ್ದು, ಆದಿವಾಸಿ ಸಮುದಾಯಗಳ ಶಿಕ್ಷಣ ಮತ್ತು ಸಮಗ್ರ ಅಭಿವೃದ್ಧಿಗಾಗಿ ನಿರಂತರ ಪ್ರಯತ್ನಗಳು ನಡೆಯಬೇಕು ಎಂದು ಅವರು ಒತ್ತಿಹೇಳಿದರು.

ನಾಳೆ ರಾಷ್ಟ್ರಪತಿ ಮುರ್ಮು ಅವರು ಕುನ್ಹೋ ರಾಷ್ಟ್ರೀಯ ಉದ್ಯಾನವನಕ್ಕೆ ಭೇಟಿ ನೀಡಲಿದ್ದು, ಸಹರಿಯಾ ಬುಡಕಟ್ಟು ಸಮುದಾಯದ ಸದಸ್ಯರು, ಚೀತಾ ಟ್ರ್ಯಾಕರ್‌ಗಳು ಹಾಗೂ ಉದ್ಯಾನವನದ ಕ್ಷೇತ್ರ ಸಿಬ್ಬಂದಿಯೊಂದಿಗೆ ಸಂವಾದ ನಡೆಸಲಿದ್ದಾರೆ.

---

ಅಮೆರಿಕ ಮತ್ತು ಇರಾನ್ ನಡುವಿನ ಮಧ್ಯಂತರ ಒಪ್ಪಂದವನ್ನು ಬಲಪಡಿಸುವ ಮತ್ತು ಪಶ್ಚಿಮ ಏಷ್ಯಾ ಸಂಘರ್ಷವನ್ನು ಕೊನೆಗೊಳಿಸುವ ಪ್ರಯತ್ನಗಳನ್ನು ಪರಿಗಣಿಸುವ ಗುರಿಯನ್ನು ಹೊಂದಿರುವ ಮಾತುಕತೆಗಳು ಇಂದು ಸ್ವಿಟ್ಜರ್‌ಲ್ಯಾಂಡ್‌ನ ಬರ್ಗೆನ್‌ಸ್ಟಾಕ್‌ನಲ್ಲಿ ಪ್ರಾರಂಭವಾದವು. ಕತಾರ್ ಮತ್ತು ಪಾಕಿಸ್ತಾನ ಈ ಮಾತುಕತೆಯ ಮಧ್ಯಸ್ಥಿಕೆ ವಹಿಸುತ್ತಿವೆ.

ಅಮೆರಿಕದ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಅಮೆರಿಕದ ನಿಯೋಗವನ್ನು ಮುನ್ನಡೆಸುತ್ತಿದ್ದರೆ, ಇರಾನ್‌ನ ನಿಯೋಗವನ್ನು ಸ್ಪೀಕರ್ ಮೊಹಮ್ಮದ್ ಬಘರ್ ಗಾಲಿಬಾಫ್ ಮತ್ತು ವಿದೇಶಾಂಗ ಸಚಿವ ಅಬ್ಬಾಸ್ ಅರಗ್ಚಿ ನೇತೃತ್ವ ವಹಿಸಿದ್ದಾರೆ.

ಲೆಬನಾನ್ ಮೇಲೆ ಇಸ್ರೇಲ್ ನಡೆಸಿದ ನಿರಂತರ ದಾಳಿಯಿಂದಾಗಿ ಟೆಹ್ರಾನ್ ಮತ್ತೆ ಹಾರ್ಮುಜ್ ಜಲಸಂಧಿಯನ್ನು ಮುಚ್ಚಿದ ನಂತರ ಈ ಸಭೆ ನಡೆದಿದೆ. ಆದಾಗ್ಯೂ, ಜಲಮಾರ್ಗವು ಎಲ್ಲಾ ಹಡಗುಗಳಿಗೆ ಮುಕ್ತವಾಗಿದೆ ಎಂದು ಯುಎಸ್ ಮಿಲಿಟರಿ ಹೇಳಿದೆ.

ಕತಾರ್ ಮತ್ತು ಪಾಕಿಸ್ತಾನದ ಪ್ರತಿನಿಧಿಗಳೊಂದಿಗೆ, ಟೆಹ್ರಾನ್ ಮತ್ತು ವಾಷಿಂಗ್ಟನ್ ನಂತರದಲ್ಲಿ ಚತುರ್ಭುಜ ಮಾತುಕತೆಗಳಲ್ಲಿ ಭಾಗವಹಿಸಲಿವೆ.

ನಾಲ್ಕು ಪಕ್ಷಗಳ ಮಾತುಕತೆಗೆ ಮುಂಚಿತವಾಗಿ, ವಿಶೇಷ ರಾಯಭಾರಿ ಸ್ಟೀವ್ ವಿಟ್ಕಾಫ್ ಅವರನ್ನು ಒಳಗೊಂಡ ಅಮೆರಿಕ ನಿಯೋಗ ಮತ್ತು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಅಳಿಯ ಜೇರೆಡ್ ಕುಶ್ನರ್ ಪಾಕಿಸ್ತಾನದ ಮಧ್ಯಸ್ಥಿಕೆ ತಂಡದೊಂದಿಗೆ ಸಭೆ ನಡೆಸಿದರು.

---

ಇಂದು ೧೨ನೇ ಅಂತಾರಾಷ್ಟ್ರೀಯ ಯೋಗ ದಿನವನ್ನು ಪ್ರಪಂಚಾದ್ಯಂತ ಸಂಭ್ರಮದಿಂದ ಆಚರಿಸಲಾಯಿತು. ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ ಎಂಬ ಧ್ಯೇಯ ವಾಕ್ಯದಡಿಯಲ್ಲಿ ಈ ದಿನವನ್ನು ಆಚರಿಸಲಾಗುತ್ತಿದೆ.

ಮಸ್ಕತ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯ ಆವರಣದಲ್ಲಿ ವಿಶೇಷ ಕಾರ್ಯಕ್ರಮವೊಂದನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮವು ರಾಜತಾಂತ್ರಿಕ ಸದಸ್ಯರು ಭಾರತೀಯ ವಲಸಿಗರು ಮತ್ತು ಒಮನ್‌ನಾದ್ಯಂತ ಯೋಗ ಉತ್ಸಾಹಿಗಳನ್ನು ಒಗ್ಗೂಡಿಸಿತು.

ಸಾಮೂಹಿಕವಾಗಿ ಪ್ರದರ್ಶಿಸಿದ ಸಾಮಾನ್ಯ ಯೋಗವನ್ನು ಒಳಗೊಂಡಿದ್ದ ಈ ಕಾರ್ಯಕ್ರಮವು ಪ್ರದೇಶಾದ್ಯಂತ ಯೋಗ ಮತ್ತು ಯೋಗಾಸನದ ಹೆಚ್ಚುತ್ತಿರುವ ಜನಪ್ರಿಯತೆಯನ್ನು ಪ್ರದರ್ಶಿಸಿತು.

ಮತ್ತೊಂದೆಡೆ, ಕತಾರ್‌ನ ದೋಹಾದಲ್ಲಿ ಭಾರತೀಯ ಸಮುದಾಯ ಮತ್ತು ಇತರ ವಲಸಿಗ ಗುಂಪುಗಳಿಂದ ೨ ಸಾವಿರಕ್ಕೂ ಹೆಚ್ಚು ಯೋಗ ಉತ್ಸಾಹಿಗಳು ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಭಾಗವಹಿಸಿದ್ದರು. ಇದು ಕತಾರ್‌ನಲ್ಲಿ ಪ್ರಾಚೀನ ಅಭ್ಯಾಸದ ಹೆಚ್ಚುತ್ತಿರುವ ಜನಪ್ರಿಯತೆಯನ್ನು ಒತ್ತಿ ಹೇಳುತ್ತದೆ.

ಯುನೈಟೆಡ್ ಅರಬ್ ಎಮಿರೇಟ್ಸ್-ಯುಎಇ ಯಾದ್ಯಂತ ಸಾವಿರಾರು ನಿವಾಸಿಗಳು ಇಂದು ಯೋಗ ದಿನಾಚರಣೆಯಲ್ಲಿ ಭಾಗವಹಿಸಿದ್ದರು. ಇದು ಮೆಗಾ ಯೋಗ ಅಧಿವೇಶನಗಳೊಂದಿಗೆ ಸಮುದಾಯ ಸ್ಥಳಗಳನ್ನು ಸ್ವಾಸ್ಥ್ಯ ಮತ್ತು ಸಾಂಸ್ಕೃತಿಕ ವಿನಿಮಯದ ಕೇಂದ್ರಗಳಾಗಿ ಪರಿವರ್ತಿಸಿತು.

ದುಬೈನಲ್ಲಿ ಭಾರತದ ರಾಯಭಾರ ಕಚೇರಿಯು ದುಬೈ ಪೊಲೀಸರ ಸಹಯೋಗದೊಂದಿಗೆ ದುಬೈ ಪೊಲೀಸ್ ಅಧಿಕಾರಿಗಳ ಕ್ಲಬ್‌ನಲ್ಲಿ ಯೋಗ ಆಚರಣೆಯನ್ನು ಆಯೋಜಿಸಲಾಗಿತ್ತು. ಶಾಲಾ ಮಕ್ಕಳು, ಕುಟುಂಬಗಳು ಮತ್ತು ವೈದ್ಯ ಸಮುದಾಯದ ಉತ್ಸಾಹಿಗಳು ಸೇರಿದಂತೆ ಎಲ್ಲಾ ವಯಸ್ಸಿನ ಸುಮಾರು ಒಂದು ಸಾವಿರದ ೫೦೦ ಕ್ಕೂ ಹೆಚ್ಚು ಜನರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

---

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಇಂದು ಲಡಾಖ್‌ನ ಲೇಹ್‌ನಲ್ಲಿ ನಡೆದ ೧೨ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಆರೋಗ್ಯಕರ ಸಂತೋಷದಾಯಕ ಮತ್ತು ಹೆಚ್ಚು ಶಾಂತಿಯುತ ಸಮಾಜಕ್ಕಾಗಿ ನಾಗರಿಕರು ಯೋಗವನ್ನು ತಮ್ಮ ದೈನಂದಿನ ಜೀವನದ ಅವಿಭಾಜ್ಯ ಅಂಗವನ್ನಾಗಿ ಮಾಡಿಕೊಳ್ಳುವಂತೆ ಕರೆ ನೀಡಿದರು.

ಕೇಂದ್ರ ಸರ್ಕಾರದ ವಿವಿಧ ಸಚಿವಾಲಯಗಳು ಮತ್ತು ಅವುಗಳ ಅಧೀನದಲ್ಲಿರುವ ಇಲಾಖೆಗಳು ಇಂದು ನವದೆಹಲಿಯಲ್ಲಿ ೧೨ನೇ ಅಂತಾರಾಷ್ಟ್ರೀಯ ಯೋಗ ದಿನವನ್ನು ಆಚರಿಸಲು ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಿದ್ದವು.

ಸಂವಹನ ಸಚಿವಾಲಯದ ಅಧೀನದಲ್ಲಿರುವ ದೂರ ಸಂಪರ್ಕ ಇಲಾಖೆಯು ನವದೆಹಲಿಯ ಸಂಚಾರ್ ಭವನದಲ್ಲಿ ಕಾರ್ಯಕ್ರಮವನ್ನು ಆಯೋಜಿಸಿತ್ತು. ಇಲಾಖೆಯ ಹಿರಿಯ ಅಧಿಕಾರಿಗಳು ಮತ್ತು ೧೦೦ಕ್ಕೂ ಹೆಚ್ಚು ಸಿಬ್ಬಂದಿಗಳು ಯೋಗ ಅಧಿವೇಶನದಲ್ಲಿ ಭಾಗವಹಿಸಿ ವಿವಿಧ ಯೋಗ ಆಸನಗಳು, ಧ್ಯಾನದ ಅಭ್ಯಾಸಗಳನ್ನು ಮಾಡಿದರು.

ಗೃಹ ವ್ಯವಹಾರಗಳ ಸಚಿವಾಲಯ, ಭೂ ಸಂಪನ್ಮೂಲ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಇಲಾಖೆ, ವಿದೇಶಾಂಗ ಸಚಿವಾಲಯದ ಸಿಬ್ಬಂದಿ ಮತ್ತು ತರಬೇತಿ ಇಲಾಖೆ ಹಾಗೂ ಭಾರತ ಸರ್ಕಾರದ ಪ್ರಧಾನ ವೈಜ್ಞಾನಿಕ ಸಲಹೆಗಾರರ ಕಚೇರಿ ಜಂಟಿಯಾಗಿ ನವದೆಹಲಿಯ ಕರ್ತವ್ಯ ಭವನದಲ್ಲಿ ಯೋಗ ದಿನಾಚರಣೆಯನ್ನು ಆಯೋಜಿಸಿದ್ದವು. ಆರೋಗ್ಯಕರ ಜೀವನ ಶೈಲಿ ಮತ್ತು ಸಮಗ್ರ ಯೋಗಕ್ಷೇಮವನ್ನು ಉತ್ತೇಜಿಸುವಲ್ಲಿ ಯೋಗದ ಮಹತ್ವವನ್ನು ಈ ಕಾರ್ಯಕ್ರಮವು ಬಿಂಬಿಸಿತು.

---

ತಮಿಳುನಾಡಿನ ಪೆರಿಯಪಾಳ್ಯಂನಲ್ಲಿರುವ ಸಮುದ್ರಾಹಾರ ರಫ್ತು ಕಂಪನಿಯಲ್ಲಿ ಇಂದು ಸಂಭವಿಸಿದ ಅಮೋನಿಯಾ ಅನಿಲ ಸೋರಿಕೆಯಿಂದ ಕನಿಷ್ಠ ೭ ಜನರು ಸಾವನ್ನಪ್ಪಿದ್ದು, ೭೦ ಕ್ಕೂ ಹೆಚ್ಚು ಕಾರ್ಮಿಕರು ಅಸ್ವಸ್ಥಗೊಂಡಿದ್ದಾರೆ.

ಪ್ರಾಥಮಿಕ ವರದಿಗಳ ಪ್ರಕಾರ, ರಕ್ಷಣಾ ಮತ್ತು ವೈದ್ಯಕೀಯ ಕಾರ್ಯಾಚರಣೆಗಳು ಮುಂದುವರಿದಂತೆ ಸಾವಿನ ಸಂಖ್ಯೆ ಹೆಚ್ಚಾಗಬಹುದು.

ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ, ವಿಶೇಷ ರಾಸಾಯನಿಕ, ಜೈವಿಕ ಮತ್ತು ಪರಮಾಣು ನಿರ್ವಹಣಾ ತಂಡಗಳೊಂದಿಗೆ, ತಕ್ಷಣದ ರಕ್ಷಣಾ ಕಾರ್ಯಾಚರಣೆಯನ್ನು ಪ್ರಾರಂಭಿಸಿ, ಕಟ್ಟುನಿಟ್ಟಾದ ಸುರಕ್ಷತಾ ಶಿಷ್ಟಾಚಾರಗಳ ಅಡಿಯಲ್ಲಿ ಸೋರಿಕೆಯನ್ನು ತಡೆಗಟ್ಟಲು ಪ್ರಯತ್ನ ನಡೆಸಲಾಗಿದೆ.

ಘಟನೆಯ ಕುರಿತು ತನಿಖೆ ನಡೆಸಲು ಮೂವರು ಸದಸ್ಯರ ಉನ್ನತ ಮಟ್ಟದ ಸಮಿತಿಯೊಂದನ್ನು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ರಚಿಸಿದ್ದು, ೨೪ ಗಂಟೆಗಳ ಒಳಗೆ ವರದಿ ಸಲ್ಲಿಸುವಂತೆ ಸಮಿತಿಗೆ ನಿರ್ದೇಶನ ನೀಡಿದ್ದಾರೆ.

---

ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕಾಗಿ ನಡೆದ ರಾಷ್ಟ್ರೀಯ ಅರ್ಹತಾ-ಪ್ರವೇಶ ಪರೀಕ್ಷೆ ನೀಟ್-ಯುಜಿ ೨೦೨೬ ರ ಮರುಪರೀಕ್ಷೆಯನ್ನು ಇಂದು ಬಿಗಿ ಭದ್ರತೆಯ ನಡುವೆ ಸರಾಗವಾಗಿ ನಡೆಸಲಾಯಿತು.

ಭಾರತದ ೫೫೧ ನಗರಗಳು ಮತ್ತು ವಿದೇಶಗಳ ೧೪ ನಗರಗಳಲ್ಲಿ, ೨೨.೭೯ ಲಕ್ಷಕ್ಕೂ ಹೆಚ್ಚು ಅಭ್ಯರ್ಥಿಗಳು ಪರೀಕ್ಷೆಗೆ ನೊಂದಾಯಿಸಿಕೊಂಡಿದ್ದರು. ಪರೀಕ್ಷೆಯನ್ನು ಮಧ್ಯಾಹ್ನ ೨ ರಿಂದ ಸಂಜೆ ೫:೧೫ ರವರೆಗೆ ಇಂಗ್ಲಿಷ್ ಸೇರಿದಂತೆ ೧೨ ಭಾರತೀಯ ಭಾಷೆಗಳಲ್ಲಿ ನಡೆಸಲಾಯಿತು.

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ -ಎನ್‌ಟಿಎ, ಪರೀಕ್ಷೆಗೆ ಮುಂಚಿತವಾಗಿ ನಿನ್ನೆ ರಾಷ್ಟ್ರವ್ಯಾಪಿ ಅಣಕು ಡ್ರಿಲ್ ಅನ್ನು ನಡೆಸಿತ್ತು. ಪರೀಕ್ಷೆಯ ಸುಗಮ, ಸುರಕ್ಷಿತ ಮತ್ತು ಪಾರದರ್ಶಕ ನಡವಳಿಕೆಯನ್ನು ಖಚಿತಪಡಿಸಿಕೊಳ್ಳಲು ವೀಕ್ಷಕರು, ಸಂಯೋಜಕರು, ಪೊಲೀಸ್ ಸಿಬ್ಬಂದಿ ಮತ್ತು ಆಡಳಿತ ಸಿಬ್ಬಂದಿ ಸೇರಿದಂತೆ ಎರಡು ಲಕ್ಷಕ್ಕೂ ಹೆಚ್ಚು ಸಿಬ್ಬಂದಿಯನ್ನು ಕರ್ತವ್ಯಕ್ಕೆ ನಿಯೋಜಿಸಲಾಗಿತ್ತು.

ಸಿಸಿಟಿವಿ ಕಣ್ಗಾವಲು, ಆಧಾರ್ ಆಧಾರಿತ ಬಯೋಮೆಟ್ರಿಕ್ ಪರಿಶೀಲನೆ, ಪರೀಕ್ಷಾ ಸಾಮಗ್ರಿಗಳ ಸಾಗಣೆಗೆ ಪೊಲೀಸ್ ಬೆಂಗಾವಲುಗಳೊಂದಿಗೆ ಜಿಪಿಎಸ್-ಸಕ್ರಿಯಗೊಳಿಸಿದ ವಾಹನಗಳು ಮತ್ತು ಮೊಹರು ಮಾಡಿದ ಗೌಪ್ಯ ದಾಖಲೆಗಳ ಸುರಕ್ಷಿತ ನಿರ್ವಹಣೆ ಸೇರಿದಂತೆ ಬಹು-ಹಂತದ ಭದ್ರತಾ ಚೌಕಟ್ಟನ್ನು ಪರೀಕ್ಷೆ ದೃಷ್ಟಿಯಿಂದ ಜಾರಿಗೊಳಿಸಲಾಗಿತ್ತು. ತಪ್ಪು ಮಾಹಿತಿಯನ್ನು ನಿಗ್ರಹಿಸಲು ಮತ್ತು ದುಷ್ಕೃತ್ಯವನ್ನು ತಡೆಗಟ್ಟಲು ಎನ್‌ಟಿಎ ಸಾಮಾಜಿಕ ಮಾಧ್ಯಮ ವೇದಿಕೆಗಳನ್ನು ಸಕ್ರಿಯವಾಗಿ ಮೇಲ್ವಿಚಾರಣೆ ನಡೆಸಿತು.

---

ದಂಬುಲ್ಲಾದಲ್ಲಿ ಇಂದು ನಡೆದ ತ್ರಿಕೋನ ಏಕದಿನ ಕ್ರಿಕೆಟ್ 'ಎ' ಸರಣಿಯ ಫೈನಲ್ ಪಂದ್ಯದಲ್ಲಿ ಭಾರತ 'ಎ' ತಂಡ ಆತಿಥೇಯ ಶ್ರೀಲಂಕಾ 'ಎ' ತಂಡವನ್ನು ೬೬ ರನ್‌ಗಳಿಂದ ಸೋಲಿಸಿ ಪ್ರಶಸಿ ಮುಡಿಗೇರಿಸಿಕೊಂಡಿದೆ.

ಮೊದಲು ಬ್ಯಾಟಿಂಗ್ ಮಾಡಿದ ಭಾರತ 'ಎ' ತಂಡ ನಿಗದಿತ ೫೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೩೭೭ ರನ್‌ಗಳ ಭಾರೀ ಮೊತ್ತ ಪೇರಿಸಿತು. ಭಾರತದ ಪರ ವೈಭವ್ ಸೂರ್ಯವಂಶಿ ಕೇವಲ ೧೧ ಎಸೆತಗಳಲ್ಲಿ ಅರ್ಧಶತಕ ಸಿಡಿಸಿ, ೨೯ ಎಸೆತಗಳಲ್ಲಿ ೯೪ ರನ್‌ಗಳನ್ನು ಗಳಿಸಿ ಶ್ರೀಲಂಕಾ ಬೌಲರ್‌ಗಳ ಬೆವರಿಳಿಸಿದರು.

ಶ್ರೀಲಂಕಾ 'ಎ' ತಂಡದ ಪರ ಕುಗತಾಸ್ ಮಥುಲನ್, ರವಿಂದು ಫರ್ನಾಂಡೊ ಹಾಗೂ ವನುಜ ಸಾಹನ್ ತಲಾ ಎರಡು ವಿಕೆಟ್ ಪಡೆದರು.

---

ಮ್ಯಾಂಚೆಸ್ಟರ್‌ನ ಓಲ್ಡ್ ಟ್ರ್ಯಾಫ್‌ಫೋರ್ಡ್ ಕ್ರೀಡಾಂಗಣದಲ್ಲಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್ ಗುಂಪು -೧ರ ಪಂದ್ಯದಲ್ಲಿ ಇಂದು ಭಾರತ-ದಕ್ಷಿಣ ಆಫ್ರಿಕಾ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಭಾರತ ತಂಡ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ. ಇತ್ತೀಚಿನ ವರದಿ ಬಂದಾಗ ಭಾರತ ೮ ಓವರ್‌ಗಳಲ್ಲಿ, ೩ ವಿಕೆಟ್ ನಷ್ಟಕ್ಕೆ, ೬೮ ರನ್ ಗಳಿಸಿ ಆಡುತ್ತಿದೆ.

__________ ಮುಕ್ತಾಯ __________